**ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಬನಹಟ್ಟಿ**

**ಸಿ.ಸಿ. ನಂ. 1/2021**
**ಸಿ.ಡಬ್ಲ್ಯೂ:3 ಪಿ.ಡಬ್ಲ್ಯೂ: 3**

| | | |
|---|---|---|
| ಸಾಕ್ಷಿದಾರರ ಹೆಸರು | ಪರಸಪ್ಪ ಅವತಿ | |
| ತಂದೆ ಹೆಸರು | ಮಹಾಲಿಂಗಪ್ಪ | |
| ವಯಸ್ಸು | 58 | ವರ್ಷ |
| ಉದ್ಯೋಗ | ಕೂಲಿ ಕೆಲಸ | |
| ವಾಸಸ್ಥಳ | ಮಹಾಲಿಂಗಪೂರ | |

**ಸಾಕ್ಷಿಯನ್ನು ಇಂದು ದಿನಾಂಕ: 19-12-2025 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.**
**ಮುಖ್ಯ ವಿಚಾರಣೆ: ಮಾನ್ಯ ಎಪಿಪಿ ರವರಿಂದ**

ಚಾಸಾ-2 ನನಗೆ ಪರಿಚಯ ಇಲ್ಲ. ಸುಮಾರು 4 ವರ್ಷಗಳ ಹಿಂದೆ ಪೊಲೀಸರು ನನ್ನ ಒಂದು ದಾಖಲಾತಿ ಮೇಲೆ ಸಹಿ ಪಡೆದಿರುತ್ತಾರೆ. ನನ್ನ ಸಮಕ್ಷಮ ಯಾರು ಪಂಚನಾಮೆಯನ್ನು ಮಾಡಿರುವುದಿಲ್ಲ. ಸದರಿ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ.

ಸಾಕ್ಷಿಯು ಈಗಾಗಲೇಗುರುತಿಸಿದ ಸ್ಥಳ ಪಂಚನಾಮೆಯಾದ ನಿಪಿ-2 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಸಹಿಯನ್ನು ನಿಪಿ-2 ಬಿ ಎಂದು ಗುರುತಿಸಲಾಯಿತು.

ಸಾಕ್ಷಿ ನಿಪಿ-3 ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಎಪಿಪಿ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಿ ಪಾಟಿ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಸಹಾಯಕ ಸರ್ಕಾರಿ ಅಭಿಯೋಜಕರಿಂದ :**

ದಿನಾಂಕ 02-09-2020 ರಂದು ಮಧ್ಯಾಹ್ನ 3-30 ಗಂಟೆಯಿಂದ 04-30 ಗಂಟೆಯವರಿಗೆ ಚಾಸಾ- 9 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಬನಹಟ್ಟಿ ಪೊಲೀಸರು ನಿಪಿ-2 ರಂತೆ ಸ್ಥಳ ಪಂಚನಾಮೆಯನ್ನು ಜರುಗಿಸಿ ನಿಪಿ-3 ರಂತೆ ಛಾಯಾಚಿತ್ರವನ್ನು ಪಡೆದಿರುತ್ತಾರೆಂದರೆ ಸರಿಯಲ್ಲ.

ನಿಪಿ-2 ರಂತೆ ನನ್ನ ಸಮಕ್ಷಮ ಪಂಚನಾಮೆಯನ್ನು ಜರುಗಿಸಿದರೂ ಸಹ ಆರೋಪಿ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

Sd/-
ಸಿವಿಲ್ ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,
ಬನಹಟ್ಟಿ.